AGRI-AMS/37/2020-AGRI PLAN B-AGRICULTURE

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಪುರಸ್ಕೃತ ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD) ಯೋಜನೆಯಡಿ 2018-19ನೇ ಸಾಲಿನ ಮರುಮೌಲ್ಯೀಕರಿಸಿದ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: AGRI-AML-91/2020, ದಿನಾಂಕ: 02.06.2020 ಮತ್ತು ಸೇರ್ಪಡೆ ಆದೇಶ ದಿನಾಂಕ:16.06.2020.

2. ಸರ್ಕಾರದ ಆದೇಶ ಸಮ ಸಂಖ್ಯೆಯ ದಿನಾಂಕ: AGRI-AMS/37/2020, ದಿನಾಂಕ: 16.07.2020, 27.08.2020 ಮತ್ತು 08.10.2020.

3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 1-26/2018-RFS-III (pt) ದಿನಾಂಕ:09.12.2020

4. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಉಕೃನಿ/ರನಿಪ್ರ/NMSA-RAD/ಅ.ಬಿ/2020-21, ದಿನಾಂಕ: 14.12.2020.

*****

ಪ್ರಸ್ತಾವನೆ:

2020-21ನೇ ಸಾಲಿನ ಆಯವ್ಯಯ ಸಂಪುಟ-3 ರಲ್ಲಿ ಕೇಂದ್ರ ಪುರಸ್ಕೃತ ಯೋಜನೆ ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ(RAD) ಯೋಜನೆಗಾಗಿ ಲೆಕ್ಕ ಶೀರ್ಷಿಕೆ: 2401-00-108-1-16 ರಡಿ ಒಟ್ಟು ರೂ.1667.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶ ಮತ್ತು ಸೇರ್ಪಡೆ ಆದೇಶದಲ್ಲಿ ಕೇಂದ್ರ ಪುರಸ್ಕೃತ ಯೋಜನೆ ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD) ಯೋಜನೆಯನ್ನು 2020-21ನೇ ಸಾಲಿಗೆ ಮುಂದುವರೆಸುತ್ತಾ, ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶಗಳಲ್ಲಿ 2020-21ನೇ ಸಾಲಿನ ಕೇಂದ್ರ ಪುರಸ್ಕೃತ ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD) ಯೋಜನೆಯ ಕಾರ್ಯಕ್ರಮದ ಅನುಷ್ಠಾನಕ್ಕಾಗಿ 2019-20ನೇ ಸಾಲಿನ ಮರುಮೌಲ್ಯೀಕರಿಸಿದ ಅನುದಾನ ಹಾಗೂ ಮೊದಲನೇ ಕಂತಿನ ಅನುದಾನ ಸೇರಿ ಈ ವರೆಗೆ ಒಟ್ಟು **ರೂ.1197.54 ಲಕ್ಷಗಳನ್ನು** ಈಗಾಗಲೇ ಲೆಕ್ಕ ಶೀರ್ಷಿಕೆ: 2401-00-108-1-16 ರಡಿ ಬಿಡುಗಡೆಗೊಳಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಕೇಂದ್ರ ಸರ್ಕಾರದ ಪತ್ರದಲ್ಲಿ, 2018-19ನೇ ಸಾಲಿನ ಸದರಿ ಯೋಜನೆಯ ಉಳಿಕೆ ಅನುದಾನ ರೂ. 22.24 ಲಕ್ಷಗಳನ್ನು ಮರುಮೌಲ್ಯೀಕರಿಸಿ 2020-21ನೇ ಸಾಲಿನಲ್ಲಿ ಬಳಸಿಕೊಳ್ಳಲು ಅನುಮತಿಯನ್ನು ನೀಡಲಾಗಿದೆ.

ಮೇಲೆ ಓದಲಾದ (4)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ 2020-21ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD) ಯೋಜನೆ ಕಾರ್ಯಕ್ರಮದ ಅನುಷ್ಠಾನಕ್ಕಾಗಿ 2018-19ನೇ ಸಾಲಿನ ಮರುಮೌಲ್ಯೀಕರಿಸಿದ ಅನುದಾನ ರೂ.22.24 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2401-00-108-1-16 ಅಡಿ ಬಿಡುಗಡೆ ಮಾಡುವಂತೆ ಕೋರಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 37 ಕೃಉಇ 2020, ಬೆಂಗಳೂರು, ದಿನಾಂಕ: 25.01.2021.**

2020-21ನೇ ಸಾಲಿನ ಕೇಂದ್ರ ಪುರಸ್ಕೃತ ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD) ಯೋಜನೆಯಡಿ ಲೆಕ್ಕ ಶೀರ್ಷಿಕೆ: 2401-00-108-1-16 ರಡಿ 2018-19ನೇ ಸಾಲಿನ ಮರುಮೌಲ್ಯೀಕರಿಸಿದ ಅನುದಾನ (ಕೇಂದ್ರ ಹಾಗೂ ರಾಜ್ಯದ ಪಾಲು ಸೇರಿ) **ರೂ.22.24 ಲಕ್ಷಗಳನ್ನು (ಇಪ್ಪತ್ತೆರಡು ಲಕ್ಷದ ಇಪ್ಪತ್ನಾಲ್ಕು ಸಾವಿರ ರೂಪಾಯಿಗಳು ಮಾತ್ರ)** ಈ ಕೆಳಕಂಡಂತೆ ವರ್ಗವಾರು ಬಿಡುಗಡೆ ಮಾಡುತ್ತಾ, ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಈ ಮೂಲಕ ಮಂಜೂರಾತಿ ನೀಡಿದೆ.

(ರೂ.ಲಕ್ಷಗಳಲ್ಲಿ)

| ವರ್ಗ/ಉಪ ಶೀರ್ಷಿಕೆ | ಕೇಂದ್ರದ ಪಾಲಿನ ಅನುದಾನ (60%) | ರಾಜ್ಯದ ಪಾಲಿನ ಅನುದಾನ (40%) | ಒಟ್ಟು ಮೊತ್ತ |
|---|---|---|---|
| ಸಹಾಯಧನ-ಸಾಮಾನ್ಯ (106) | 1.44 | 0.96 | **2.40** |
| ಪರಿಶಿಷ್ಟ ಜಾತಿ ಉಪ ಯೋಜನೆ (422) | 6.23 | 4.16 | **10.39** |
| ಗಿರಿಜನ ಉಪ ಯೋಜನೆ (423) | 5.67 | 3.78 | **9.45** |
| ಒಟ್ಟು | **13.34** | **8.90** | **22.24** |

ಸದರಿ ಬಿಡುಗಡೆ ಮಾಡಲಾದ ಅನುದಾನವನ್ನು ಕೃಷಿ ಇಲಾಖೆಯು ಜಲಾನಯನ ಅಭಿವೃದ್ಧಿ ಇಲಾಖೆಯ CCO ಗೆ ನೀಡಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅನುಮೋದನೆ ನೀಡಿದೆ.

ಕೃಷಿ ನಿರ್ದೇಶಕರು/ ಜಲಾನಯನ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ಕೇಂದ್ರ ಸರ್ಕಾರವು "Rainfed Area Development" ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

AGRI-AMS/37/2020-AGRI PLAN B-AGRICULTURE

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್ಡಿ 04 ಟಿ.ಎಫ್.ಪಿ 2020, ದಿನಾಂಕ:24.11.2020 ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ

ಮತ್ತು ಅವರ ಹೆಸರಿನಲ್ಲಿ

P. Sat 25/1/202

(ಪಿ. ಸತ್ಯಭಾಮ)

ಸರ್ಕಾರದ ಅಧೀನ ಕಾರ್ಯದರ್ಶಿ

ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
8. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
10. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ - 4&5), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
14. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.